ದೂರವಾಣಿ ಸಂಖ್ಯೆ: 080–22212343
ಫ್ಯಾಕ್ಸ್ ಸಂಖ್ಯೆ: 080–22278803
ಅಂತರ್ಜಾಲ: www.kptcl.com
ಇ–ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009)**

**ಸಂಖ್ಯೆ: ಕವಿಪ್ರನಿನಿ/ಬಿ16/9457/2019–20** **ದಿನಾಂಕ:** 24.03.2020

## <u>ಸುತ್ತೋಲೆ</u>

ವಿಷಯ: ಕೋವಿಡ್–19 ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ಸಾಮಾಜಿಕ ಅಂತರವನ್ನು ಪಾಲಿಸುವ ನಿಟ್ಟಿನಲ್ಲಿ ಕವಿಪ್ರನಿನಿಯ ಎಲ್ಲಾ ಅಧಿಕಾರಿ/ನೌಕರರಿಗೆ ದಿನಾಂಕ: 24.03.2020 ರಿಂದ 31.03.2020 ರವರೆಗೆ ಕಚೇರಿಗೆ ಬರುವುದರಿಂದ ವಿನಾಯಿತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020 ದಿನಾಂಕ: 23.03.2020.
2. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 7 ಸೇನಿಎಫ್ 2020, ದಿನಾಂಕ: 23.03.2020.
3. ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯು 54 ಸಿಜಿಎಂ 2020 ದಿನಾಂಕ: 23.03.2020.

*****

ಇತ್ತೀಚೆಗೆ ಕೋವಿಡ್–19 ವೈರಾಣು ಕರ್ನಾಟಕ ರಾಜ್ಯದಲ್ಲಿ ತೀವ್ರವಾಗಿ ಹರಡುತ್ತಿದ್ದು, ಇದನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ರಾಜ್ಯ ಸರ್ಕಾರವು ಹಲವಾರು ಕ್ರಮಗಳನ್ನು ಕೈಗೊಂಡು ಸೂಚನೆಗಳನ್ನು ಉಲ್ಲೇಖದ ಆದೇಶಗಳಲ್ಲಿ ನೀಡಿರುತ್ತದೆ. ಈ ನಿಟ್ಟಿನಲ್ಲಿ ರಾಜ್ಯದಾದ್ಯಂತ ನಿಗಮದ ಎಲ್ಲಾ ಆಡಳಿತ ಕಚೇರಿಗಳ ಅಧಿಕಾರಿ/ನೌಕರರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ದಿನಾಂಕ: 24.03.2020 ರಿಂದ ದಿನಾಂಕ: 31.03.2020 ರವರೆಗೆ ಕಚೇರಿಗೆ ಬರುವುದರಿಂದ ವಿನಾಯಿತಿ ನೀಡಲಾಗಿದೆ.

1. ನಿರಂತರ ಹಾಗೂ ಅಡೆತಡೆ ಇಲ್ಲದೆ ವಿದ್ಯುತ್ ಪ್ರಸರಣ ಹಾಗೂ ನಿರ್ವಹಣೆಗೆ ಸಂಬಂಧಿಸಿದಂತೆ ಈ ಕೆಳಕಂಡ ಕಚೇರಿಯ ಅಧಿಕಾರಿ/ನೌಕರರು ತಮ್ಮ ಮುಖ್ಯ ಇಂಜಿನಿಯರ್(ವಿ) ಮತ್ತು ನೋಡಲ್ ಅಧಿಕಾರಿಗಳ ವಿವೇಚನೆಯಂತೆ ಕಾರ್ಯನಿರ್ವಹಿಸತಕ್ಕದ್ದು:

   (ಅ) ನಿಗಮದ ಎಲ್ಲಾ 400ಕೆವಿ/220ಕೆವಿ/110ಕೆವಿ/66ಕೆವಿ ಸ್ಥಾವರಗಳ ಪಾಳಿ ಹಾಗೂ ನಿರ್ವಹಣೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಎಂದಿನಂತೆ ಕಾರ್ಯನಿರ್ವಹಿಸುವುದು. ಸಂಬಂಧಪಟ್ಟ ಕಚೇರಿಯ ಮುಖ್ಯಸ್ಥರು / ನೋಡಲ್ ಅಧಿಕಾರಿಯು ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುವುದು.

   (ಆ) ಟಿ.ಎಲ್.ಐ ಮತ್ತು ಹಾಟ್‌ಲೈನ್ ವಿಭಾಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು.

   (ಇ) ಎಸ್.ಎಲ್.ಡಿ.ಸಿ ಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ವರ್ಗದ ಅಧಿಕಾರಿ/ನೌಕರರು.

2. ಕೇಂದ್ರ ಕಚೇರಿಯ ಹಾಗೂ ಎಲ್ಲಾ ಆಡಳಿತ ಶಾಖೆಗೆ ಸಂಬಂಧಿಸಿದ ಅಧಿಕಾರಿ/ನೌಕರರು ಮನೆಯಿಂದ ಕರ್ತವ್ಯ ನಿರ್ವಹಿಸತಕ್ಕದ್ದು. ಮೇಲಧಿಕಾರಿಗಳು ಕರೆದಾಗ ತಕ್ಷಣವೇ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ.

3. ಎಲ್ಲಾ ನಿರ್ವಹಣಾ ಸಿಬ್ಬಂದಿಗಳು ಸುರಕ್ಷತಾ ಸಾಧನಗಳು, ಸಮವಸ್ತ್ರ ಮತ್ತು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸತಕ್ಕದ್ದು.

4. ವ್ಯವಸ್ಥಾಪಕ ನಿರ್ದೇಶಕರು, ಪಿ.ಸಿ.ಕೆ.ಎಲ್ ಇವರು ತಮ್ಮ ಕಚೇರಿಗೆ ಸಂಬಂಧಿಸಿದಂತೆ ತುರ್ತು ಕಾರ್ಯಗಳಿಗೆ ಅಗತ್ಯವಿರುವ ಅಧಿಕಾರಿ/ನೌಕರರಿಗೆ ಕಚೇರಿಗೆ ಬರುವುದರಿಂದ ವಿನಾಯಿತಿ ನೀಡುವ ಬಗ್ಗೆ ಸೂಕ್ತ ನಿರ್ಣಯ ತೆಗೆದುಕೊಳ್ಳಬಹುದಾಗಿದೆ.

5. ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ವ್ಯವಸ್ಥಾಪಕ ನಿರ್ದೇಶಕರುಗಳು ತಮ್ಮ ಕಚೇರಿಗೆ ಸಂಬಂಧಿಸಿದಂತೆ ತುರ್ತು ಕಾರ್ಯಗಳಿಗೆ ಅಗತ್ಯವಿರುವ ಅಧಿಕಾರಿ/ನೌಕರರಿಗೆ ಕಚೇರಿಗೆ ಬರುವುದರಿಂದ ವಿನಾಯಿತಿ ನೀಡುವ ಬಗ್ಗೆ ಸೂಕ್ತ ನಿರ್ಣಯ ತೆಗೆದುಕೊಳ್ಳಬಹುದಾಗಿದೆ.

"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ
ಇವರಿಂದ ಅನುಮೋದಿಸಲ್ಪಟ್ಟಿರುತ್ತದೆ"

24/3/2020

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.